**ಕರ್ನಾಟಕ ಸರಕಾರ**

ಸಂ:ಬಿಜಿಎಂ:ಡಿಯುಡಿಸಿ:ಯುಪಿಎಸಿ:ಸಿಆರ್:1:2012-13

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ನಗರ ಬಡತನ ನಿರ್ಮೂಲನಾ ಕೋಶ,
ಬೆಳಗಾವಿ. ದಿನಾಂಕ:30.05.2012.

**ವಿಷಯ:** ನಗರಸಭೆ ಗೋಕಾಕ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ನಗರಸಭೆ ಆದಾಯದಡಿ ಶೇ.7.25 ಮತ್ತು ಶೇ.3ರಡಿ ತೆಗೆದುಕೊಂಡ ಕಾರ್ಯಕ್ರಮ/ಕಾಮಗಾರಿಗಳ ಕ್ರಿಯಾ ಯೋಜನೆ ಅನುಮೋದನೆ ಕುರಿತು.

**ಓದಿತು:**-1)ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ:415:ಜಿಇಎಲ್:2011 ದಿನಾಂಕ:27.02.2012

2)ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಸುತ್ತೋಲೆಸಂ:ಪೌನಿ:22.75:ಸುತ್ತೋಲೆ:2:2012-13 ದಿನಾಂಕ:24.04.2012

3)ಪೌರಾಯುಕ್ತರು, ನಗರಸಭೆ ಗೋಕಾಕ ಇವರ ಪತ್ರ ಸಂಖ್ಯೆ: ನಸಗೋ:ಲೋಇ:ಎಂಎಫ್:ಶೇ.7.25, 3:2012-13:240 ದಿನಾಂಕ:26.05.2012

**ಪ್ರಸ್ತಾವನೆ:**

2012-13ನೇ ಸಾಲಿಗೆ ಗೋಕಾಕ ನಗರಸಭೆಯು ಸರ್ಕಾರದ ಸುತ್ತೋಲೆಯ ಮಾರ್ಗಸೂಚಿಗಳನ್ವಯ ಬಾಬ್ತುಗಳನ್ನು ಹೊರತುಪಡಿಸಿ ರೂ.94.94 ಲಕ್ಷಗಳ ಆದಾಯವನ್ನು ಹೊಂದಿರುತ್ತದೆ. ಅದರಂತೆ ಓದಿತು (3)ರನ್ವಯ ಪೌರಾಯುಕ್ತರು, ನಗರಸಭೆ ಗೋಕಾಕ ಇವರು ನಗರಸಭೆ ಆದಾಯದಲ್ಲಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಕಾರ್ಯಕ್ರಮಗಳಿಗೆ ರೂ.6.88 ಲಕ್ಷಗಳಲ್ಲಿ 06 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ.2.85 ಲಕ್ಷಗಳಲ್ಲಿ 08 ಕಾರ್ಯಕ್ರಮಗಳಿಗೆ ಕ್ರಿಯಾ ಯೋಜನೆ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಅದರಂತೆ ಓದಿತು (1)ರ ಸರ್ಕಾರದ ಸುತ್ತೋಲೆ ಮಾರ್ಗಸೂಚಿಯಂತೆ ಪರಿಶೀಲಿಸಲಾಗಿ, ಶೇ.7.25ರಷ್ಟು ನಗರದ ಇತರೆ ಬಡಜನರ ಕಲ್ಯಾಣ ನಿಧಿಗೆ ರೂ.6.88 ಲಕ್ಷಗಳಲ್ಲಿ 06 ಕಾರ್ಯಕ್ರಮಗಳಿಗೆ ಹಾಗೂ ಶೇ.3ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ.2.85 ಲಕ್ಷಗಳಲ್ಲಿ 08 ಕಾರ್ಯಕ್ರಮಗಳಿಗೆ ಕ್ರಿಯಾ ಯೋಜನೆ ಅನುಮೋದನೆಗೆ ಪ್ರಸ್ತಾಪಿಸಿದ್ದನ್ನು ಪರಿಗಣಿಸಲಾಗಿದೆ.

| ಕ್ರ.ಸಂ | ಕಾರ್ಯಕ್ರಮಗಳ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| *1* | *2* | *3* |
| | **ಶೇ.7.25ರ ಇತರೆ ಬಡಜನರ ಕಲ್ಯಾಣ ಕಾರ್ಯಕ್ರಮ/ಕಾಮಗಾರಿಗಳು** | |
| | **ವ್ಯಕ್ತಿ ಸಂಬಧಿತ ಅನುಕೂಲತೆಗಳು** | |
| | **ವಸತಿ** | |
| 1 | ಪಕ್ಕಾ ಮನೆ ನಿರ್ಮಾಣಕ್ಕಾಗಿ ಸಹಾಯಧನ ಒದಗಿಸುವದು. | 1.40 |
| | **ಆರೋಗ್ಯ** | |
| 2 | ಭಾರಿ ಶಸ್ತ್ರ ಚಿಕಿತ್ಸೆಗೆ ಸಹಾಯಧನ ನೀಡುವುದು. | 0.68 |

| | | |
|---|---|---|
| | **ಶಿಕ್ಷಣ** | |
| 3 | ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಆರ್ಥಿಕ ನೆರವು ನೀಡುವುದು. | |
| | ಎಸ್.ಎಸ್.ಎಲ್.ಸಿ. ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ | 0.12 |
| | ಪಿ.ಯು.ಸಿ/ಡಿಪ್ಲೋಮಾ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ | 0.30 |
| | ಪದವಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ | 0.20 |
| | ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಧನ | 0.24 |
| | **ಮೂಲಸೌಕರ್ಯಗಳು** | |
| 4 | ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಸಹಾಯಧನ ನೀಡುವುದು. | 1.20 |
| 5 | ನೀರಿ ಸಂಪರ್ಕ ವೆಚ್ಚ ಭರಿಸುವುದು. | 0.34 |
| 6 | ಅಡುಗೆ ಅನಿಲ ಸಂಪರ್ಕ ಒದಗಿಸುವುದು. | 2.40 |
| | **ಒಟ್ಟು** | **6.88** |
| | **ಶೇ.3ರ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳು** | |
| | **ವ್ಯಕ್ತಿ ಸಂಬಧಿತ ಅನುಕೂಲತೆಗಳು** | |
| | **ಶಿಕ್ಷಣ** | |
| 1 | ಎಂಬಿಬಿಎಸ್ ಮತ್ತು ಬಿಇ ವ್ಯಾಸಂಗ ಮಾಡುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಡೆಸ್ಕ್‌ಟಾಪ್ ಕಂಪ್ಯೂಟರ್/ಲ್ಯಾಪ್‌ಟಾಪ್ ಖರೀದಿಗಾಗಿ ಸಹಾಯಧನ ಒದಗಿಸುವದು. | 0.25 |
| | **ಆರೋಗ್ಯ** | |
| 2 | ಶಸ್ತ್ರ ಚಿಕಿತ್ಸೆಗಾಗಿ ಸಹಾಯಧನ ನೀಡುವದು. | 0.25 |
| | **ಮೂಲಸೌಕರ್ಯ** | |
| 3 | ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಸಹಾಯಧನ ನೀಡುವದು. | 0.20 |
| 4 | ಅಡುಗೆ ಅನಿಲ ಸಂಪರ್ಕ ಒದಗಿಸುವದು. | 0.44 |
| | **ಸಮುದಾಯ ಸಂಬಂಧಿತ ಅನುಕೂಲತೆಗಳು** | |
| 5 | ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆಯ ನೆರವಿನೊಂದಿಗೆ ನಡೆಯುವ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಶಿಬಿರಗಳಿಗೆ ಆರ್ಥಿಕ ನೆರವು ನೀಡುವದು. | 0.50 |
| 6 | ಕೊಳಚೆ ಪ್ರದೇಶಗಳಲ್ಲಿ ಆರೋಗ್ಯ ತಪಾಸಣೆ ಹಾಗೂ ನೈರ್ಮಲ್ಯದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. | 0.56 |
| 7 | ಅಂಗವಿಕಲರಿಗೆ ಕಾನೂನು ಅರಿವು ಶಿಬಿರ ಏರ್ಪಡಿಸಲು ಆರ್ಥಿಕ ನೆರವು ನೀಡುವುದು. | 0.50 |
| 8 | ಅಂಗವಿಕಲರ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸಂಸ್ಥೆಗಳಿಗೆ ಸಹಾಯಧನ ನೀಡುವುದು. | 0.15 |
| | **ಒಟ್ಟು** | **2.85** |

**ಆದೇಶ**

ಮೇಲಿನ ಪ್ರಸ್ತಾವನೆಯಂತೆ ನಗರಸಭೆ ಗೋಕಾಕ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ನಗರಸಭೆ ಆದಾಯದಡಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಯೋಜನೆಯಡಿ ರೂ.6.88 ಲಕ್ಷಗಳಲ್ಲಿ 06 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಯೋಜನೆಯಡಿ ರೂ.2.85 ಲಕ್ಷಗಳಲ್ಲಿ 08 ಕಾರ್ಯಕ್ರಮಗಳನ್ನು ಕೈಕೊಳ್ಳಲು ಕ್ರಿಯಾಯೋಜನೆ ಅನುಮೋದನೆ ನೀಡಿ ಓದಿತು (1) ಹಾಗೂ (2)ರ ಸರ್ಕಾರದ ಸುತ್ತೋಲೆಯ ನಿಬಂಧನೆ ಹಾಗೂ ಷರತ್ತುಗಳಿಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

**ಸಹಿ/-**
**(ವಿ. ಅನ್ಬುಕುಮಾರ)**
ಜಿಲ್ಲಾಧಿಕಾರಿಗಳು, ಬೆಳಗಾವಿ

**ಪ್ರತಿ:**ಗೌರವಾದರಗಳೊಂದಿಗೆ, ಆಯುಕ್ತರು ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಾದರಪಡಿಸಿದೆ.
**ಪ್ರತಿ:**ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ.
**ಪ್ರತಿ:**ಪೌರಾಯುಕ್ತರು, ನಗರಸಭೆ ಗೋಕಾಕ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

**ಸಹಿ/-**

ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ,
ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ